14/8/15
1643

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಬೆಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರದ ಅನುದಾನದಡಿ ಅನುಮೋದನೆಯಾಗಿರುವ ಕಾಮಗಾರಿಗಳಲ್ಲಿ ಉಳಿತಾಯವಾಗಿರುವ ಹಣದಲ್ಲಿ ಹೆಚ್ಚುವರಿ ಕಾಮಗಾರಿಗಳನ್ನು ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ: (1) ಸರ್ಕಾರದ ಆದೇಶ ಸಂಖ್ಯೆ:ನಅಇ 200 ಬಿಎಂಆರ್ 2009, ದಿನಾಂಕ: 19-09-2011

(2) ಸರ್ಕಾರದ ಆದೇಶ ಸಂಖ್ಯೆ:ನಅಇ 200 ಬಿಎಂಆರ್ 2009, ದಿನಾಂಕ: 05-04-2012

(3) ಪತ್ರ ಸಂಖ್ಯೆ: ಬಿಎಂಆರ್‌ಡಿಎ/ಬಿಐಎಎಪಿಎ/ವರ್ಕ್ಸ್/51/2011-12, ದಿನಾಂಕ: 12-03-2015.

ಪ್ರಸ್ತಾವನೆ:-

ಮೇಲೆ (1)ರಲ್ಲಿ ಓದಲಾದ ದಿನಾಂಕ:19-09-2011ರ ಆದೇಶದಲ್ಲಿ ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಯಲ್ಲಿ ಬರುವ ಆನೇಕಲ್, ಹೊಸಕೋಟೆ, ಮಾಗಡಿ, ನೆಲಮಂಗಲ, ಕನಕಪುರ ಮತ್ತು ಬೆಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರಗಳಲ್ಲಿ ಲಭ್ಯವಿರುವ ಹಣದಲ್ಲಿ ಶೇಕಡ 25ರಷ್ಟು ಹಣವನ್ನು ಆಡಳಿತಾತ್ಮಕ ವೆಚ್ಚಗಳಿಗೆ ಮೀಸಲಿರಿಸಿಕೊಂಡು ಉಳಿದ ಹಣದಲ್ಲಿ ರೂ.25.00 ಲಕ್ಷಗಳ ಪ್ರತಿ ಅಂದಾಜು ವೆಚ್ಚಗಳಿಗೆ ಕಡಿಮೆ ಇಲ್ಲದಂತೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 68-ಎ(ಸಿ) ರಲ್ಲಿ ಅವಕಾಶ ಕಲ್ಪಿಸಿರುವಂತೆ ಕೆಲವು ಅಭಿವೃದ್ಧಿ ಕಾರ್ಯಗಳನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಹಾಗೂ ಲೋಕೋಪಯೋಗಿ ಇಲಾಖೆ ವತಿಯಿಂದ ಕೈಗೊಳ್ಳಲು ಸರ್ಕಾರದ ಮಂಜೂರಾತಿ ನೀಡಲಾಗಿತ್ತು.

ನಂತರ, ಮೇಲೆ (2) ರಲ್ಲಿ ಓದಲಾದ ದಿನಾಂಕ:05-04-2012ರ ಆದೇಶದಲ್ಲಿ ಬೆಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರದಲ್ಲಿನ ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಉತ್ತರ (ಅಪರ) ತಾಲ್ಲೂಕಿನ ಹೆಸರಘಟ್ಟ ಹೋಬಳಿ ಮತ್ತು ಜಾಲ ಹೋಬಳಿ ಹಾಗೂ ದೊಡ್ಡಬಳ್ಳಾಪುರ ತಾಲ್ಲೂಕು ವ್ಯಾಪ್ತಿಯಲ್ಲಿ ಒಟ್ಟು 43ಕೋಟಿ 75ಲಕ್ಷ ರೂ. ಗಳ ವಿವಿಧ ಕಾಮಗಾರಿಗಳನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ ಮತ್ತು ಲೋಕೋಪಯೋಗಿ ಇಲಾಖೆ ವತಿಯಿಂದ ಕೈಗೊಳ್ಳಲು ಕೆಲವು ನಿಬಂಧನೆಗೊಳಪಟ್ಟು ಅನುಮೋದನೆ ನೀಡಲಾಗಿರುತ್ತದೆ.

ಮಹಾನಗರ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ ಇವರು ಮೇಲೆ(3) ರಲ್ಲಿ ಓದಲಾದ ಪತ್ರದಲ್ಲಿ, ಬೆಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರವು, ಪ್ರಾಧಿಕಾರದ ಸಭೆಯ ವಿಷಯ ಸಂಖ್ಯೆ:101(13)ರಲ್ಲಿ ತೆಗೆದುಕೊಂಡಿರುವ ನಿರ್ಣಯದಂತೆ, ದಿನಾಂಕ:05-04-2012ರ ಸರ್ಕಾರದ ಆದೇಶದಲ್ಲಿ ಜಾಲ ಹೋಬಳಿ ವ್ಯಾಪ್ತಿಯಲ್ಲಿ ಮಂಜೂರಾತಿಯಾಗಿದ್ದ ರೂ. 8.80 ಕೋಟಿ ಮೊತ್ತದ ಕಾಮಗಾರಿಗಳ ಟೆಂಡರ್ ಪ್ರಕ್ರಿಯೆಯಲ್ಲಿ ಗುತ್ತಿಗೆದಾರರು ಅನುಮೋದಿತ ದರಗಳಿಗಿಂತ ಕಡಿಮೆ ದರಗಳನ್ನು ನಮೂದಿಸಿರುವ ಕಾರಣ ಉಳಿತಾಯವಾಗಿರುವ ರೂ.1,59,03,000.00 (ಒಂದು ಕೋಟಿ ಐವತ್ತೊಂಬತ್ತು ಲಕ್ಷದ ಮೂರು

ಸಾವಿರ ರೂಪಾಯಿಗಳು ಮಾತ್ರ) ಮೊತ್ತದಲ್ಲಿ ಈ ಕೆಳಕಂಡ ಹೆಚ್ಚುವರಿ ಕಾಮಗಾರಿಗಳನ್ನು ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ಕೋರಿ ಪ್ರಸ್ತಾವನೆ ಸಲ್ಲಿಸಿದ್ದು, ಸದರಿ ಪ್ರಸ್ತಾವನೆಗೆ ಅನುಮೋದನೆ ನೀಡುವಂತೆ ಕೋರಿರುತ್ತಾರೆ.

ಕ್ರ.ಸಂ	ಕಾಮಗಾರಿಯ ಹೆಸರು	ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ)
1	ಬೆಂಗಳೂರು ಉತ್ತರ ತಾಲ್ಲೂಕು, ಜಾಲಾ ಹೋಬಳಿ, ತರಹುಣಸೆ ಗ್ರಾಮದಲ್ಲಿ ರಸ್ತೆ ಮತ್ತು ಚರಂಡಿ ಅಭಿವೃದ್ಧಿ ಕಾಮಗಾರಿ	25.00
2	ಬೆಂಗಳೂರು ಉತ್ತರ ತಾಲ್ಲೂಕು, ಜಾಲಾ ಹೋಬಳಿ, ಮಹದೇವ ಕೊಡಿಗೇಹಳ್ಳಿ, ಮಜರ ಯಡಿಯೂರು, ಸಿಂಗಹಳ್ಳಿ ಮತ್ತು ಮೈಲನಹಳ್ಳಿ ಮಜರ ಕಾಡಯರಪ್ಪನಹಳ್ಳಿ ಗ್ರಾಮಗಳಲ್ಲಿ ಸಿಮೆಂಟ್ ಕಾಂಕ್ರೀಟ್ ರಸ್ತೆ ಮತ್ತು ಆರ್.ಸಿ.ಸಿ. ಚರಂಡಿ ನಿರ್ಮಾಣ ಕಾಮಗಾರಿ	44.00
3	ಬೆಂಗಳೂರು ಉತ್ತರ ತಾಲ್ಲೂಕು, ಜಾಲಾ ಹೋಬಳಿ, ಚನ್ನಹಳ್ಳಿಯಿಂದ ತರಬನಹಳ್ಳಿಗೆ ಹೋಗುವ ರಸ್ತೆ, ಚಿಕ್ಕಜಾಲ ಮತ್ತು ಬೈನಹಳ್ಳಿ ಗ್ರಾಮದಲ್ಲಿ ಸಿಮೆಂಟ್ ಕಾಂಕ್ರೀಟ್ ರಸ್ತೆ ಮತ್ತು ಆರ್.ಸಿ.ಸಿ. ಚರಂಡಿ ನಿರ್ಮಾಣ ಕಾಮಗಾರಿ	40.00
4	ಬೆಂಗಳೂರು ಉತ್ತರ ತಾಲ್ಲೂಕು, ಜಾಲಾ ಹೋಬಳಿ, ಬೈಯಪ್ಪಹಳ್ಳಿ ಮತ್ತು ಮರಳುಕುಂಟೆ ಗ್ರಾಮದಲ್ಲಿ ಸಿಮೆಂಟ್ ಕಾಂಕ್ರೀಟ್ ರಸ್ತೆ ಮತ್ತು ಆರ್.ಸಿ.ಸಿ. ಚರಂಡಿ ನಿರ್ಮಾಣ ಕಾಮಗಾರಿ	25.00
5	ಬೆಂಗಳೂರು ಉತ್ತರ ತಾಲ್ಲೂಕು, ಜಾಲಾ ಹೋಬಳಿ, ಬೊಕ್ಕನಹಳ್ಳಿ ಮತ್ತು ಮಂಚಪ್ಪಹಳ್ಳಿ ಗ್ರಾಮದಲ್ಲಿ ಸಿಮೆಂಟ್ ಕಾಂಕ್ರೀಟ್ ರಸ್ತೆ ಮತ್ತು ಆರ್.ಸಿ.ಸಿ. ಚರಂಡಿ ನಿರ್ಮಾಣ ಕಾಮಗಾರಿ	25.00
	ಒಟ್ಟು ರೂ.	**159.00 (ರೂ. ಒಂದು ನೂರ ಐವತ್ತೊಂಬತ್ತು ಲಕ್ಷಗಳು ಮಾತ್ರ)**

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ನಅಇ 53 ಬಿಎಂಆರ್ 2015, ಬೆಂಗಳೂರು ದಿನಾಂಕ:10–08–2015

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಬೆಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರದ 101ನೇ ಸಭೆಯ ವಿಷಯ ಸಂಖ್ಯೆ: 101(13)ರಲ್ಲಿ ತೆಗೆದುಕೊಂಡಿರುವ ನಿರ್ಣಯದಂತೆ ದಿನಾಂಕ:05–04–2012ರ ಸರ್ಕಾರದ ಆದೇಶದಲ್ಲಿ ಜಾಲ ಹೋಬಳಿ ವ್ಯಾಪ್ತಿಯಲ್ಲಿ ಮಂಜೂರಾತಿಯಾಗಿದ್ದ ರೂ. 8.80 ಕೋಟಿ ಮೊತ್ತದ ಕಾಮಗಾರಿಗಳ ಟೆಂಡರ್ ಪ್ರಕ್ರಿಯೆಯಲ್ಲಿ

ಗುತ್ತಿಗೆದಾರರು ಅನುಮೋದಿತ ದರಗಳಿಗಿಂತ ಕಡಿಮೆ ದರಗಳನ್ನು ನಮೂದಿಸಿರುವ ಕಾರಣ ಉಳಿತಾಯವಾಗಿರುವ ರೂ.1,59,03,000.00 (ಒಂದು ಕೋಟಿ ಐವತ್ತೊಂಬತ್ತು ಲಕ್ಷದ ಮೂರು ಸಾವಿರ ರೂಪಾಯಿಗಳು ಮಾತ್ರ) ಮೊತ್ತದಲ್ಲಿ ಈ ಕೆಳಕಂಡ ಹೆಚ್ಚುವರಿ ಕಾಮಗಾರಿಗಳನ್ನು ಕೈಗೊಳ್ಳಲು ಕೆಳಕಂಡ ಷರತ್ತಿಗೊಳಪಟ್ಟು ಸರ್ಕಾರದ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಕ್ರ.ಸಂ	ಕಾಮಗಾರಿಯ ಹೆಸರು	ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ)
1	ಬೆಂಗಳೂರು ಉತ್ತರ ತಾಲ್ಲೂಕು, ಜಾಲಾ ಹೋಬಳಿ, ತರಹುಣಸೆ ಗ್ರಾಮದಲ್ಲಿ ರಸ್ತೆ ಮತ್ತು ಚರಂಡಿ ಅಭಿವೃದ್ಧಿ ಕಾಮಗಾರಿ	25.00
2	ಬೆಂಗಳೂರು ಉತ್ತರ ತಾಲ್ಲೂಕು, ಜಾಲಾ ಹೋಬಳಿ, ಮಹದೇವ ಕೊಡಿಗೇಹಳ್ಳಿ, ಮಜರ ಯಡಿಯೂರು, ಸಿಂಗಹಳ್ಳಿ ಮತ್ತು ಮೈಲನಹಳ್ಳಿ ಮಜರ ಕಾಡಯರಪ್ಪನಹಳ್ಳಿ ಗ್ರಾಮಗಳಲ್ಲಿ ಸಿಮೆಂಟ್ ಕಾಂಕ್ರೀಟ್ ರಸ್ತೆ ಮತ್ತು ಆರ್.ಸಿ.ಸಿ. ಚರಂಡಿ ನಿರ್ಮಾಣ ಕಾಮಗಾರಿ	44.00
3	ಬೆಂಗಳೂರು ಉತ್ತರ ತಾಲ್ಲೂಕು, ಜಾಲಾ ಹೋಬಳಿ, ಚನ್ನಹಳ್ಳಿಯಿಂದ ತರಬನಹಳ್ಳಿಗೆ ಹೋಗುವ ರಸ್ತೆ, ಚಿಕ್ಕಜಾಲ ಮತ್ತು ಬೈನಹಳ್ಳಿ ಗ್ರಾಮದಲ್ಲಿ ಸಿಮೆಂಟ್ ಕಾಂಕ್ರೀಟ್ ರಸ್ತೆ ಮತ್ತು ಆರ್.ಸಿ.ಸಿ. ಚರಂಡಿ ನಿರ್ಮಾಣ ಕಾಮಗಾರಿ	40.00
4	ಬೆಂಗಳೂರು ಉತ್ತರ ತಾಲ್ಲೂಕು, ಜಾಲಾ ಹೋಬಳಿ, ಬೈಯಪ್ಪಹಳ್ಳಿ ಮತ್ತು ಮರಳುಕುಂಟೆ ಗ್ರಾಮದಲ್ಲಿ ಸಿಮೆಂಟ್ ಕಾಂಕ್ರೀಟ್ ರಸ್ತೆ ಮತ್ತು ಆರ್.ಸಿ.ಸಿ. ಚರಂಡಿ ನಿರ್ಮಾಣ ಕಾಮಗಾರಿ	25.00
5	ಬೆಂಗಳೂರು ಉತ್ತರ ತಾಲ್ಲೂಕು, ಜಾಲಾ ಹೋಬಳಿ, ಬೊಕ್ಕನಹಳ್ಳಿ ಮತ್ತು ಮಂಚಪ್ಪಹಳ್ಳಿ ಗ್ರಾಮದಲ್ಲಿ ಸಿಮೆಂಟ್ ಕಾಂಕ್ರೀಟ್ ರಸ್ತೆ ಮತ್ತು ಆರ್.ಸಿ.ಸಿ. ಚರಂಡಿ ನಿರ್ಮಾಣ ಕಾಮಗಾರಿ	25.00
	ಒಟ್ಟು ರೂ.	**159.00 (ರೂ. ಒಂದು ನೂರ ಐವತ್ತೊಂಬತ್ತು ಲಕ್ಷಗಳು ಮಾತ್ರ)**

(1) ಕಾಮಗಾರಿ ಕೈಗೊಳ್ಳಲು ಪ್ರಸ್ತಾಪಿಸಿರುವ ರಸ್ತೆಗಳಿಗೆ ವಿವರವಾದ ಯೋಜನಾ ವರದಿ ತಯಾರಿಸತಕ್ಕದ್ದು;

(2) ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999 ಮತ್ತು ಅದರಡಿ ರೂಪಿಸಿರುವ ನಿಯಮಗಳಡಿ ಕಾರ್ಯವಿಧಾನವನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು;

(3) ಟೆಂಡರ್ ಪ್ರಕ್ರಿಯೆಯಲ್ಲಿ ಇ-ಟೆಂಡರ್ ವಿಧಾನ ಅನುಸರಿಸತಕ್ಕದ್ದು;

(4) ಕಾಮಗಾರಿಗಳ ತಪಾಸಣೆಯನ್ನು ಮೂರನೇ ವ್ಯಕ್ತಿಯಿಂದ (Third party) ಮಾಡಿಸಿ, ಗುಣಮಟ್ಟ ಖಚಿತಪಡಿಸಿಕೊಳ್ಳತಕ್ಕದ್ದು;

(5) ಯಾವ ಯಾವ ಕಾಮಗಾರಿಗಳಿಗೆ ಅನುದಾನ ನಿಗಧಿಪಡಿಸಲಾಗಿದೆಯೋ, ಅದೇ ಕಾಮಗಾರಿಗೆ ವಿನಿಯೋಗಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎನ್. ನರಸಿಂಹಮೂರ್ತಿ)
ಸರ್ಕಾರದ ಅಧೀನ ಕಾರ್ಯದರ್ಶಿ
ನಗರಾಭಿವೃದ್ಧಿ ಇಲಾಖೆ.

ಗೆ,

(1) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿ ಕಟ್ಟಡ.
(2) ಸರ್ಕಾರದ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, ವಿಕಾಸಸೌಧ.
(3) ಮಹಾನಗರ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ, ಎಲ್.ಆರ್.ಡಿ.ಇ.ಬಿಲ್ಡಿಂಗ್, ಆಲಿ ಆಸ್ಕರ್ ರಸ್ತೆ, ಬೆಂಗಳೂರು.
(4) ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಬೆಂಗಳೂರು.
(5) ಅಧ್ಯಕ್ಷರು, ಬೆಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ದೇವನಹಳ್ಳಿ.
(6) ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು ಹಾಗೂ ಸದಸ್ಯ ಕಾರ್ಯದರ್ಶಿ, ಬೆಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ದೇವನಹಳ್ಳಿ.
(7) ಕಛೇರಿ ಪ್ರತಿ.
(8) ಹೆಚ್ಚುವರಿ ಪ್ರತಿ – 02.